ಪರಿಶಿಷ್ಟರ ಮೇಲಿನ ದೌರ್ಜನ್ಯವನ್ನು ಸಹಿಸುವುದಿಲ್ಲ

ಎಸ್ಸಿಎಸ್ಪಿ, ಟಿಎಸ್ಪಿ ಅನುದಾನ ಸಮರ್ಪಕವಾಗಿ ಸದ್ಬಳಕೆ ಆಗಬೇಕು: ಡಾ.ಎಲ್ ಮೂರ್ತಿ

ಉದಯಕಾಲ ನ್ಯೂಸ್

ದೇವನಹಳ್ಳಿ: ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಮೇಲಿನ ಶೋಷಣೆ, ದೌರ್ಜನ್ಯಗಳನ್ನು ಆಯೋಗವು ಪರಿಶೀಲಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಿದೆ ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷ ಡಾ.ಎಲ್. ಮೂರ್ತಿ ಹೇಳಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ನಡೆದ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ನೆರೆದಿದ್ದ ಸಾರ್ವಜನಿಕರು ಹಾಗೂ ಸಮುದಾಯದ ಮುಖಂಡರಿಂದ ಅಹವಾಲು ಸ್ವೀಕರಿಸಿದರು ವಿಚಾರಗಳ ಬಗ್ಗೆ ಚರ್ಚಿಸಿದರು.

ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಯಾವುದೇ ವ್ಯಕ್ತಿ ಅಥವಾ ಸಮುದಾಯ,ಶೋಷಣೆ ಮತ್ತು ದೌರ್ಜನ್ಯಕ್ಕೊಳಗಾದರೆ ಆಯೋಗವು ತಕ್ಷಣ ನಿರ್ದಾಕ್ಷಿಣ್ಯವಾಗಿ ಕಾನೂನಾತ್ಮಕ ಕ್ರಮ ತೆಗೆದುಕೊಳ್ಳುತ್ತದೆ. ಈ ಸಂಬಂಧವಾಗಿ ಆಯೋಗಕ್ಕೆ ಬಂದು ಪ್ರಕರಣ ದಾಖಲಿಸಬಹುದು.

ಪ್ರಮುಖವಾಗಿ ಶೋಷಣೆ, ದೌರ್ಜನ್ಯ, ಜಮೀನಿನ ಖಾತೆ, ಪಹಣಿ, ಸ್ಮಶಾನ, ಸಮುದಾಯ ಭವನ, ಎಸ್ಸಿಎಸ್ಪಿ ಮತ್ತು ಟಿಎಸ್‌ಪಿ ಅನುದಾನ ಬಳಕೆ, ಅಕ್ರಮ ಮದ್ಯ ಮಾರಾಟ, ಪೊಲೀಸ್ ನಡವಳಿಕೆ, ಕಾಮಗಾರಿಗಳಿಗೆ ನಾಮ ಫಲಕ, ಆಶ್ರಯ ಯೋಜನೆ ಮುಂತಾದ ಸಮಸ್ಯೆಗಳ ಬಗ್ಗೆ ಸಮಾಜದ ಮುಖಂಡರು ತಿಳಿಸಿದ್ದಾರೆ. ಇವುಗಳನ್ನು ಆಯೋಗವು ಕುಲಂಕುಶವಾಗಿ ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದು ಮುಂದಿನ ಕ್ರಮ ಕೈಗೊಳ್ಳಲಿದೆ ಎಂದರು.

ಬಳಿಕ ಇದೇ ನಡೆದ ಜಿಲ್ಲಾಮಟ್ಟದ ಅಧಿಕಾರಿಗಳ ಸಭೆಯಲ್ಲಿ, ಎಲ್ಲಾ ಇಲಾಖೆಗಳಿಂದ ಜಿಲ್ಲೆಗೆ ಹಂಚಿಕೆಯಾಗಿರುವ ಅನುದಾನದ ಬಗ್ಗೆ ಮಾಹಿತಿ ಪಡೆದು, ವಿಸ್ತೃತವಾಗಿ ಚರ್ಚಿಸಿದರು. ಎಸ್‌ಸಿ/ ಎಸ್‌ಟಿ ಸಮುದಾಯಗಳ ನಾಗರಿಕ ಹಕ್ಕುಗಳು, ಶಿಕ್ಷಣ ಹಾಗೂ ಅವರನ್ನು ಸಾಮಾಜಿಕವಾಗಿ ಸದೃಢರಾಗಿಸಲುಷ ಅಧಿಕಾರಿಗಳು ಶ್ರಮವಹಿಸಬೇಕು ಎಂದು ಹಲವು ಸೂಚನೆ ಮತ್ತು ನಿರ್ದೇಶನಗಳನ್ನು ನೀಡಿದರು.

ಅನುದಾನ ಸದ್ಬಳಕೆ ಆಗಬೇಕು

ಸರ್ಕಾರವು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಅನುದಾನ ಒದಗಿಸಲಿದ್ದು ಆ ಹಣವು ಸಂಪೂರ್ಣವಾಗಿ ಪರಿಶಿಷ್ಟರ ಅಭಿವೃದ್ಧಿಗೆ ಸಮರ್ಪಕವಾಗಿ ಸದ್ಬಳಕೆ ಆಗಬೇಕು. ಪುರಸಭೆ, ನಗರಸಭೆ 24.5% ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ 25% ಹಣ ಪರಿಶಿಷ್ಟರಿಗೆ ಮೀಸಲಿಡಲಾಗುತ್ತದೆ. ಆ ಹಣ ದುರುಪಯೋಗ ಪಡಿಸಿಕೊಳ್ಳುವುದು ಅಥವಾ ಇತರೆ ಕೆಲಸಗಳಿಗೆ ಅನುದಾನ ಬಳಕೆ ಮಾಡುವುದು ಅಪರಾಧ. ಅಂತಹ ಲೋಪ ಎಸಗುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ಕಾಮಗಾರಿಗಳಿಗೆ ನಾಮಫಲಕ ಅಳವಡಿಸಿ

ಎಸ್ಸಿಎಸ್ಪಿ ಟಿಎಸ್ಪಿ ಅನುದಾನ ಯೋಜನೆಯಡಿ ಕೈಗೊಂಡಿರುವ ರಸ್ತೆ, ಚರಂಡಿ ಮುಂತಾದ ಕಾಮಗಾರಿಗಳು ಮುಗಿದ ನಂತರ ಅಲ್ಲಿ ನಾಮಫಲಕ ಅಳವಡಿಸಿ ಇದರಿಂದ ಅಕ್ರಮ ಬಿಲ್ಲುಗಳು ಮಾಡಿಕೊಳ್ಳುವುದು ತಪ್ಪುತ್ತದೆ.

ಅಕ್ರಮ ಮದ್ಯ ಮಾರಾಟ ತಡೆ

ಗ್ರಾಮೀಣ ಪ್ರದೇಶದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಕೇರಿ, ಕಾಲೋನಿಗಳಲ್ಲಿ ಸಣ್ಣ ಅಂಗಡಿ, ಮನೆಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾರೆ. ಸಮುದಾಯದ ಜನರು ಹೆಚ್ಚಾಗಿ ಅವಲಂಬಿತರಾಗಿದ್ದಾರೆ. ಇದನ್ನು ಸಂಪೂರ್ಣವಾಗಿ ಮಟ್ಟ ಹಾಕುವ ನಿಟ್ಟಿನಲ್ಲಿ ಅಬಕಾರಿ ಅಧಿಕಾರಿಗಳು ಕ್ರಮಕೈಗೊಳ್ಳಬೇಕು ಎಂದರು.

ಕುಂದುಕೊರತೆ ಸಭೆಗಳು ಕಾಲಮಿತಿಯೊಳಗೆ ಆಗಬೇಕು ತಾಲ್ಲೂಕು ಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಜಾಗೃತಿ ಸಮಿತಿ ಸಭೆಗಳು ಕಾಲಮಿತಿಯೊಳಗೆ ಆಗಬೇಕು. ಪ.ಜಾತಿ ಪಂಗಡದ ಮುಖಂಡರನ್ನು, ಸದಸ್ಯರನ್ನು ಸಭೆಗೆ ಆಹ್ವಾನಿಸಬೇಕು. ಜಾಗೃತಿ ಸಭೆಗಳಲ್ಲಿ ಪರಿಶಿಷ್ಟರ ಸಮಸ್ಯೆಗಳಿಗೆ ತ್ವರಿತ ಪರಿಹಾರ, ಕ್ರಮ ಕೈಗೊಳ್ಳುವುದು. ಪೊಲೀಸ್ ಠಾಣೆಗಳಲ್ಲಿ ಪ.ಜಾತಿ ಪ.ಪಂಗಡದ ಜನರಿಗೆ ಗೌರವ, ಸೌಜನ್ಯದಿಂದ ವರ್ತಿಸುವುದನ್ನು ಮುಖ್ಯ ಎಂದರು.

ಪಿಟಿಸಿಎಲ್ ಪ್ರಕರಣಗಳ ತ್ವರಿತ ವಿಲೇವಾರಿ ಆಗಬೇಕು

ಭೂ ಒತ್ತುವರಿ, ಭೂ ಒಡೆತನ ಸಂಬಂಧಿಸಿದಂತೆ ಎಸಿ ನ್ಯಾಯಾಲಯದಲ್ಲಿನ ಪ್ರಕರಣಗಳ ತ್ವರಿತ ವಿಲೇವಾರಿ ಆಗಬೇಕು. ಪಿಟಿಸಿಎಲ್ ಪ್ರಕರಣಗಳು ಹೈಕೋರ್ಟ್ ನಲ್ಲಿ ತಡೆಷಇದ್ದರೆ ಅಂತಹ ಪ್ರಕರಣಗಳ ವಿಲೇವಾರಿಗೆ ಆಯೋಗದ ವತಿಯಿಂದ ಮೂರು ಜನ ಅಡ್ವೋಕೇಟ್ ನೇಮಿಸಿದ್ದು ದೂರುದಾರರು ಇದರ ಸದುಪಯೋಗ ಪಡೆದುಕೊಳ್ಳಬಹುದು.

ಸಭೆಯಲ್ಲಿ ಜಿಲ್ಲಾಧಿಕಾರಿ ಎಬಿ ಬಸವರಾಜು,ಎಸ್ಪಿ ಸಿಕೆ ಬಾಬಾ,ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಕಾರ್ಯದರ್ಶಿ ಹೆಚ್.ಎಸ್ ಶಿವರಾಂ ಹೆಚ್ ಎಸ್, ಸದಸ್ಯರಾದ ಕುಂಬಯ್ಯ, ಎಎಸ್ಪಿ ನಾಗರಾಜ್, ಜಿಪಂ ಉಪಕಾರ್ಯದರ್ಶಿ ಶಿವಕುಮಾರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಪ್ರೇಮ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.

ವೈಕುಂಠ ಏಕಾದಶಿ ಪ್ರಯುಕ್ತ ವಿಶೇಷ ಅಲಂಕಾರ

ಉದಯಕಾಲ ನ್ಯೂಸ್

ತಾವರೆಕೆರೆ : ಹೊಸಕೋಟೆ ತಾಲ್ಲೂಕಿನ ನಂದಗುಡಿ ಹೋಬಳಿಯ ತಾವರೆಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾಳಪ್ಪನಹಳ್ಳಿ ಗ್ರಾಮದ ಶ್ರೀ ಭದ್ರಕಾಳಿ ಮತ್ತು ಶ್ರೀ ಪ್ರತ್ಯಂಗಿರಾ ಶಕ್ತಿ ಪೀಠದಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ಶ್ರೀ ಭದ್ರಕಾಳಿ ದೇವಿಗೆ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿಯ ಅಲಂಕಾರ ಹಾಗೂ ಹೋಮ ಅವನ ಮೂಲಕ ವೈಕುಂಠ ಏಕಾದಶಿಯನ್ನು ಆಚರಣೆ ಮಾಡಲಾಯಿತು.

ದೇವಾಲಯದ ಧರ್ಮದರ್ಶಿಗಳಾದ ನಾಗರಾಜ್ ಶಾಸ್ತ್ರಿ ಮಾತನಾಡಿ ಶ್ರೀ ಕ್ಷೇತ್ರದಲ್ಲಿ ಸತತ 11 ವರ್ಷಗಳಿಂದ ವೈಕುಂಠ ಏಕಾದಶಿಯನ್ನು ಆಚರಣೆ ಮಾಡಿಕೊಂಡು ಬಂದಿದ್ದೇವೆ ಅದೇ ರೀತಿ ಇಂದು ಶ್ರೀ ಭದ್ರಕಾಳಿ ಅಮ್ಮನವರಿಗೆ ತಿರುಪತಿ ತಿಮ್ಮಪ್ಪನ ರೀತಿಯಲ್ಲಿ ಅಲಂಕಾರ ಮಾಡಿ ನೋಡುಗರ ಆಕರ್ಷಣೆಯ ಬಿಂದು ಆಗಿದೆ. ವೈಕುಂಠ ಏಕಾದಶಿ ಪೂಜೆಯಿಂದ ಮೋಕ್ಷ, ಪಾಪಗಳ ನಿವಾರಣೆ, ಆಂತರಿಕ ಶಾಂತಿ, ಆತ್ಮಶುದ್ಧಿ, ಹಾಗೂ ಇಷ್ಟಾರ್ಥ ಸಿದ್ಧಿ ಸಿಗುತ್ತದೆ, ಜೊತೆಗೆ ವಿಷ್ಣುವಿನ ಕೃಪೆಯಿಂದ ಜೀವನದ ಅಡೆತಡೆಗಳು ನಿವಾರಣೆಯಾಗಿ ಸಂಪತ್ತು, ಸಮೃದ್ಧಿ ಪ್ರಾಪ್ತಿಯಾಗುತ್ತದೆ ಎಂದು ನಂಬಲಾಗಿದೆ. ಈ ದಿನ ಉಪವಾಸ ಮತ್ತು ವಿಷ್ಣು ಪೂಜೆಯಿಂದ ಜನನ-ಮರಣ ಚಕ್ರದಿಂದ ಮುಕ್ತಿ ದೊರೆಯುತ್ತದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ತಾವರೆಕೆರೆ ಹಾಗೂ ಕಾಳಪ್ಪನಹಳ್ಳಿ ಗ್ರಾಮಸ್ಥರು ಹಾಗೂ ಭಕ್ತ ಸಮೂಹ ಪೂಜ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



ದೊಡ್ಡಬಳ್ಳಾಪುರ: ವೈಕುಂಠ ಏಕಾದಶಿ ಪ್ರಯುಕ್ತ ವಡ್ಡರಹಳ್ಳಿ ಕಲ್ಯಾಣ ವೆಂಕಟೇಶ್ವರ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಹಾಗೂ ಹಣ್ಣು ಹಾಗೂ ಪುಷ್ಪಗಳಿಂದ ಮಾಡಿದ ಅಲಂಕಾರ ಭಕ್ತರನ್ನು ಸಂಪ್ರೀತರನ್ನಾಗಿ ಮಾಡಿತ್ತು. ಇದೇ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ಹೆಚ್. ಮುನಿಯಪ್ಪನವರು ಹಾಗೂ ಯಲಹಂಕ ಕ್ಷೇತ್ರದ ಶಾಸಕರಾದ ಎಸ್. ಆರ್. ವಿಶ್ವನಾಥ್ ಹಾಗೂ ದೊಡ್ಡಬಳ್ಳಾಪುರ ಶಾಸಕರಾದ ಧೀರಜ್ ಮುನಿರಾಜು ರವರು ಸ್ವಾಮಿಯ ದರ್ಶನ ಪಡೆದರು.

ಬೀಡಿ ಕಾಲೋನಿ ಇ-ಖಾತೆ ಸೃಜನೆಗೆ ತಾಂತ್ರಿಕ ಅಡಚಣೆ

ಉದಯಕಾಲ ನ್ಯೂಸ್

ರಾಮನಗರ: ತಾಂತ್ರಿಕ ಕಾರಣಗಳಿಂದಾಗಿ ಬೀಡಿ ಕಾಲೋನಿಯಲ್ಲಿರುವ ಆಸ್ತಿಗಳಿಗೆ ಇ-ಖಾತಾಗಳನ್ನು ಸೃಜಿಸಲಾಗುತ್ತಿಲ್ಲ. ಬೀಡಿ ಕಾಲೋನಿ ನಗರಸಭೆ ವ್ಯಾಪ್ತಿಗೆ ಒಳಪಟ್ಟನಂತರ ಇ-ಖಾತೆ ಸೃಜಿಸಲಾಗುತ್ತದೆ. ಈ ವಿಚಾರದಲ್ಲಿ ಜನರ ದಿಕ್ಕು ತಪ್ಪಿಸುವುದು ಸರಿಯಲ್ಲ ಎಂದು ನಗರಸಭಾಧ್ಯಕ್ಷ ಕೆ.ಶೇಷಾದ್ರಿ (ಶಶಿ) ಸ್ಪಷ್ಟಪಡಿಸಿದರು.

ನಗರಸಭೆಯ ಸಭಾಂಗಣದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಇತ್ತೀಚೆಗೆ ಕೆಪಿಸಿಸಿ ಉಪಾಧ್ಯಕ್ಷರೂ ಆಗಿರುವ ಬೀಡಿ ಕಾರ್ಮಿಕರ ವಿವಿದೋದ್ದೇಶ ಸಹಕಾರ ಸಂಘ ನಿಯಮಿತದ ಅಧ್ಯಕ್ಷ ಸೈಯದ್ ಜಿಯಾವುಲ್ಲಾ ಅವರು ಅಸಲಿ ಹಕ್ಕು ಪತ್ರ ವಿತರಿಸದಿದ್ದರೆ ಪ್ರತಿಭಟನೆ ನಡೆಸುವುದಾಗಿ ನೀಡಿದ್ದ ಎಚ್ಚರಿಕೆ ಹಿನ್ನೆಲೆಯಲ್ಲಿ ಅವರು ಸ್ಪಷ್ಟನೆ ನೀಡಿದರು.

13.21 ಎಕರೆ ಪ್ರದೇಶದಲ್ಲಿರುವ ಬೀಡಿ ಕಾರ್ಮಿಕರ ಕಾಲೋನಿ ಶಿಥಿಲ್ಲಕಲ್ಲು ಗ್ರಾಮದ ಸರ್ವೆ ಸಂಖ್ಯೆ 19/1, 20/2, 21, 22/1 ಮತ್ತು 25/2ರಲ್ಲಿದೆ. 2005ರಲ್ಲಿ ಎಡಿಬಿ ಪ್ರಾಯೋಜಕತ್ವದಲ್ಲಿ ಕೆ.ಯು.ಐ.ಡಿ ಯೋಜನೆಯ ಮೂಲಕ ಇಲ್ಲಿ ಲೇಔಟ್ ಸ್ಥಾಪಿಸಲು ಸರ್ಕಾರ ಉದ್ದೇಶಿಸಿತ್ತು. ರಾಮನಗರ ಚನ್ನಪಟ್ಟಣ ನಗರಾಭಿವೃದ್ಧಿ ಪ್ರಾಧಿಕಾರ (ಈಗ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರ) ಇಲ್ಲಿ ನಿವೇಶನಗಳನ್ನು ವಿಂಗಡಿಸಿತ್ತು. ಆದರೆ ಸದರಿ ಭೂಮಿ ಅಂದು ಇದ್ದ ನಗರದಿಂದ ದೂರ ಇದ್ದಿದ್ದರಿಂದ ನಿವೇಶನಗಳನ್ನು ಪಡೆಯಲು ಸಾರ್ವಜನಿಕರಿಂದ ಸ್ಪಂದನೆ ಸಿಗಲಿಲ್ಲ ಎಂದು ಹೇಳಿದರು.

ತದ ನಂತರ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ಇಲ್ಲಿ ಆರ್ಥಿಕವಾಗಿ ಬಡ ಕುಟುಂಬಗಳಿಗೆ 20★30 ಅಳತೆಯ ನಿವೇಶನಗಳನ್ನು ವಿತರಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿತು. ಸರ್ಕಾರದ ಒಪ್ಪಿಗೆಯ ನಂತರ ಲೇಔಟ್ ಅನ್ನು ರಾಜೀವ್ ಗಾಂಧಿ ವಸತಿ ನಿಗಮ ಖರೀದಿಸಿತು ಎಂದು 20 ವರ್ಷಗಳ ಹಿಂದೆ ನಡೆದ ಬೆಳವಣಿಗೆಗಳನ್ನು ಅವರು ವಿವರಿಸಿದರು.

ಸದರಿ ಭೂಮಿಯನ್ನು ಅಂದಿನ ನಗರಸಭೆಯ ಮೂಲಕವೇ ಗುರುತಿಸಲಾಗಿದೆ. 20 ವರ್ಷಗಳಿಂದ ಈ ಭೂಮಿಯನ್ನು ನಗರಸಭೆವ್ಯಾಪ್ತಿಗೆತರಲು ಪ್ರಯತ್ನಗಳು ನಡೆದಿವೆಯೋ ಏನೋ ಗೊತ್ತಿಲ್ಲ. ಮೂಲ ದಾಖಲೆಗಳನ್ನು ಕೊಡುವಂತೆ ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಪತ್ರ ಬರೆಯಲಾಗಿತ್ತು. ಆದರೆ ದಾಖಲೆಗಳು ಜಿಲ್ಲಾಡಳಿತದ ಬಳಿ ಕೇಳುವಂತೆ ಮತ್ತು ಹಕ್ಕುಪತ್ರ ವಿತರಣೆ ಕಂದಾಯ ಇಲಾಖೆಗೆ ಒಳಪಟ್ಟಿದೆ ಎಂದು ನಿಗಮ ಹಿಂಬರಹ ಕೊಟ್ಟಿದೆ. ಬೀಡಿ ಕಾಲೋನಿ ನಗರಸಭೆ ವ್ಯಾಪ್ತಿಯಲ್ಲಿ ಇಲ್ಲದಿದ್ದರೂ ಮಾನವೀಯ ದೃಷ್ಟಿಯಿಂದ ಅಲ್ಲಿ ಕಸ ಸಂಗ್ರಹಣೆ ಮಾಡಿದ್ದೇವೆ ಎಂದು ತಿಳಿಸಿದರು.

ತಾವು ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ರಾಜೀವ್ ಗಾಂಧಿ ವಸತಿ ನಿಗಮ ವತಿಯಿಂದ ನೀಡಿರುವ ಹಕ್ಕುಪತ್ರಗಳಿಗೆ ನಗರಸಭೆ ದೃಢೀಕರಿಸಿ ನೀಡಿದೆ. ಬೀಡಿ ಕಾಲೋನಿ ನಗರಸಭೆ ವ್ಯಾಪ್ತಿಗೆ ಒಳಪಟ್ಟ ನಂತರ ಇ-ಖಾತಾಗಳನ್ನು ಮಾಡಿಕೊಡಲು ನಗರಸಭೆ ಬದ್ಧವಾಗಿದೆ. ಹೀಗಾಗಿ ಕೆಪಿಸಿಸಿ ಉಪಾಧ್ಯಕ್ಷರೂ ಆಗಿರುವ ಬೀಡಿ ಕಾರ್ಮಿಕರ ವಿವಿದೋದ್ದೇಶ ಸಹಕಾರ ಸಂಘ ನಿಯಮಿತದ ಅಧ್ಯಕ್ಷ ಸೈಯದ್ ಜಿಯಾವುಲ್ಲಾ ಅವರು ಪ್ರತಿಭಟನೆಯನ್ನು ಕೈಬಿಡಬೇಕು.

ಅವರು ಸಹ ನಗರಸಭೆಯ ಅಧ್ಯಕ್ಷರಾಗಿದ್ದರು. ತಾಂತ್ರಿಕ ಕಾರಣ ಇ-ಖಾತೆಗಳನ್ನು ಕೊಡಲಾಗುತ್ತಿಲ್ಲ. ಇಲ್ಲಿ ರಾಜಕೀಯ ಮಾಡುವುದು ಅಥವಾ ಜನರ ದಿಕ್ಕು ತಪ್ಪಿಸುವ ಕೆಲಸ ಆಗಬಾರದು ಎಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ನಗರಸಭೆ ಪೌರಾಯುಕ್ತ ಡಾ.ಜಯಣ್ಣ, ಉಪಾಧ್ಯಕ್ಷೆ ಗಿರಿಜಮ್ಮ ಗುರುವೇಗೌಡ, ಸ್ಥಾಯಿ ಸಮಿತಿ ಅಧ್ಯಕ್ಷ ಫೈರೋಜ್ ಪಾಷ, ಸದಸ್ಯರಾದ ಪಾರ್ವತಮ್ಮ, ಪವಿತ್ರ, ವಿಜಯಕುಮಾರಿ, ಮುತ್ತುರಾಜು, ದೌಲತ್ ಶರೀಫ್, ನಿಜಾಮುದ್ದೀನ್, ಭೈರೇಗೌಡ, ಸಮದ್, ಅಜ್ಮತ್, ನರಸಿಂಹ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕನಕಪುರ: ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ ಮತ್ತು ಡಾ ಚಂದ್ರಮ್ಮ ದಯಾನಂದ ಸಾಗರ್ ಆಸ್ಪತ್ರೆ, ಸಹಯೋಗದೊಂದಿಗೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಅರಳಾಳು ಯೋಜನಾ ಕಚೇರಿಯಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ದಯಾನಂದ ಸಾಗರ್ ಆಸ್ಪತ್ರೆಯ ವಿವಿಧ ವಿಭಾಗಗಳ ವೈದ್ಯರುಗಳು, ಶಿಬಿರ ಸಮನ್ವಯಾಧಿಕಾರಿ ಸುಬ್ರಹ್ಮಣ್ಯ, ತಾಲೂಕಿನ ಯೋಜನಾಧಿಕಾರಿ ನವೀನ್. ಎಂ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸಾರ್ವಜನಿಕ ಪ್ರಕಟಣೆ

ನನ್ನ ಕಕ್ಷಿದಾರ ಶ್ರೀ ಸೈಯದ್ ಸಲೀಮ್ **S/O** ಸೈಯದ್ ಸಿಕಂದರ್ ಅವರು ಕೋಯಸ್ ಫ್ಯಾಕ್ಟರಿ ಬಳಿ, ಎಂ.ಎಸ್. ಪಾಳ್ಯ, ವಿದ್ಯಾರಣ್ಯಪುರ, ಬೆಂಗಳೂರು- 560097 ರಲ್ಲಿ ವಾಸಿಸುತ್ತಿದ್ದು ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ನನ್ನ ಕಕ್ಷಿದಾರರು ನೋಂದಾಯಿತ ಮಾರಾಟ ಪತ್ರ ದಾಖಲೆ ಸಂಖ್ಯೆ YAN-1-05284-2022-23, ದಿನಾಂಕ: 18-07-2022, ರ ಮೂಲಕ ಆಸ್ತಿಯನ್ನು ಹೊಂದಿದ್ದಾರೆ, ಅವರು ಶ್ರೀ ಸೈಯದ್ ರಜಾಕ್ ಮತ್ತು ಶ್ರೀ ಸೈಯದ್ ಸಿಕಂದರ್ ನಡುವೆ GPA ದಿನಾಂಕ : 04.04.1984 ರ ಮೂಲಕ ಆಸ್ತಿಯನ್ನು ಖರೀದಿಸಿದ್ದಾರೆ . ಪ್ರಸ್ತುತ ಆವಾಸ್ ಫೈನಾನ್ಸ್ ಲಿಮಿಟೆಡ್‌ನಿಂದ ಸೌಲಭ್ಯವನ್ನು ಪಡೆಯುತ್ತಿರುವ ನನ್ನ ಕ್ಲೈಂಟ್ ಪ್ರಸ್ತಾವಿತ ಖರೀದಿಗೆ ಆಕ್ಷೇಪಿಸುವ ಅಥವಾ ವೇಳಾಪಟ್ಟಿ ಆಸ್ತಿಯ ಮೇಲೆ ಯಾವುದೇ ಹಕ್ಕುಗಳು, ಶೀರ್ಷಿಕೆ ಮತ್ತು ಆಸಕ್ತಿಯನ್ನು ಹೊಂದಿರುವ ಯಾವುದೇ ವ್ಯಕ್ತಿ /ವ್ಯಕ್ತಿಗಳು ಈ ಪ್ರಕಟಣೆಯ ದಿನಾಂಕದಿಂದ ಏಳು (07) ದಿನಗಳೊಳಗೆ ತಮ್ಮ ಆಕ್ಷೇಪಣೆಗಳು ಅಥವಾ ಹಕ್ಕುಗಳನ್ನು ಲಿಖಿತವಾಗಿ ಪೋಷಕ ದಾಖಲೆಗಳೊಂದಿಗೆ ಕೆಳಗೆ ಸಹಿ ಮಾಡಿದವರಿಗೆ ಕಳುಹಿಸಬಹುದು ನಿಗದಿತ ಸಮಯದೊಳಗೆ ಈ ಸೂಚನೆಗೆ ಯಾವುದೇ ಪ್ರತಿಕ್ರಿಯೆ ಬರದಿದ್ದರೆ, ನನ್ನ ಕಕ್ಷಿದಾರರು ಲೋನ್ ಆವಾಸ್ ಫೈನಾನ್ ಲಿಮಿಟೆಡ್‌ನೊಂದಿಗೆ ಮುಂದುವರಿಯುತ್ತಾರೆ. ನಿಗದಿತ ಸಮಯದ ನಂತರ ಯಾವುದೇ ಪ್ರತಿಕ್ರಿಯೆಯನ್ನು ನಿರ್ಲಕ್ಷಿಸಲಾಗುತ್ತದೆ. ವೇಳಾಪಟ್ಟಿ ಆಸ್ತಿ: ಆಸ್ತಿ ಹೊಂದಿರುವ ಮನೆ, ಆಸ್ತಿಯ ಎಲ್ಲಾ ಭಾಗ ಮತ್ತು ಭಾಗವು ಪಡ್ತಿಮ ಭಾಗವಾಗಿದೆ ಸೈಟ್ ಸಂಖ್ಯೆ -9, ಮೌಲ್ಯಮಾಪನ ಸಂಖ್ಯೆ. 55/15, ಪ್ರಸ್ತುತ ಬಿಬಿಎಂಪಿ ವ್ಯಾಪ್ತಿಗೆ ಒಳಪಟ್ಟಿದೆ, ಖಾತಾಸಂಖ್ಯೆ -1733/55/15/09 ಎಂ ಎಸ್‌ಪಾಳ್ಯ, ಜನಕಬಂಡೆ ಕಾವಲ್ ಗ್ರಾಮ, ಯಲಹಂಕ ಹೋಬಳಿ, ಬೆಂಗಳೂರು ಉತ್ತರ ತಾಲ್ಲೂಕ್, ಬೆಂಗಳೂರು, ಪೂರ್ವದಿಂದ ಪಶ್ಚಿಮಕ್ಕೆ : ಅಳತೆಯ